## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅನ್ನಪೂರ್ಣ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಹೊಸ ಮಹಿಂದ್ರಕರ್ ಬಿಲ್ಡಿಂಗ್, ಹುಣಸಗಿ ರಸ್ತೆ, ವಿದ್ಯಾನಗರ, ತಾಳಿಕೋಟೆ, ಬಿಜಾಪುರ ಜಿಲ್ಲೆ – 586214 ಈ ಸಂಸ್ಥೆಗೆ ಪ್ಯಾರಾ ಮೆಡಿಕಲ್ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

**ಓದಲಾಗಿದೆ:**

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಂಬಿ/58/2010–11, ದಿನಾಂಕ 24.02.2011 ಮತ್ತು ದಿನಾಂಕ 23.07.2011.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಅನ್ನಪೂರ್ಣ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಹೊಸ ಮಹಿಂದ್ರಕರ್ ಬಿಲ್ಡಿಂಗ್, ಹುಣಸಗಿ ರಸ್ತೆ, ವಿದ್ಯಾನಗರ, ತಾಳಿಕೋಟೆ, ಬಿಜಾಪುರ ಜಿಲ್ಲೆ – 586214 ಈ ಸಂಸ್ಥೆಯು 2011–12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯಲ್ಲಿ ಸದರಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ವರದಿ ಸಲ್ಲಿಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತೆಂದು, ಅದರಂತೆ, ತಪಾಸಣಾ ತಂಡವು ಸಂಸ್ಥೆಗೆ ಭೇಟಿ ನೀಡಿ, ಸ್ಥಳ ತಪಾಸಣೆ ನಡೆಸಿ, ಈ ಸಂಸ್ಥೆಯಲ್ಲಿ ಡಿಪ್ಲೊಮೋ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಶಿಫಾರಸ್ಸು ಮಾಡಿರುತ್ತದೆಂದು ತಿಳಿಸುತ್ತಾ, ಸದರಿ ಸಂಸ್ಥೆಗೆ 2011–12 ನೇ ಸಾಲಿನಿಂದ ಡಿಪ್ಲೊಮೋ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಮುಂದುವರೆದು, ತಪಾಸಣಾ ತಂಡವು ಸಲ್ಲಿಸಿರುವ ವರದಿಯನ್ನು ಹಾಗೂ ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ಜರುಗಿದ ಸಭೆಯ ನಡವಳಿಯ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಅನ್ನಪೂರ್ಣ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಹೊಸ ಮಹಿಂದ್ರಕರ್ ಬಿಲ್ಡಿಂಗ್, ಹುಣಸಗಿ ರಸ್ತೆ, ವಿದ್ಯಾನಗರ, ತಾಳಿಕೋಟೆ, ಬಿಜಾಪುರ ಜಿಲ್ಲೆ – 586214 ಈ ಸಂಸ್ಥೆಗೆ 2011–12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 29 ಎಂಎಂಇ 2011, ಬೆಂಗಳೂರು, ದಿನಾಂಕ 11-01-2012**

ಅನ್ನಪೂರ್ಣ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಹೊಸ ಮಹಿಂದ್ರಕರ್ ಬಿಲ್ಡಿಂಗ್, ಹುಣಸಗಿ ರಸ್ತೆ, ವಿದ್ಯಾನಗರ, ತಾಳಿಕೋಟೆ, ಬಿಜಾಪುರ ಜಿಲ್ಲೆ – 586214 ಈ ಸಂಸ್ಥೆಗೆ 2011–12 ನೇ ಸಾಲಿನಿಂದ ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಈ ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸಿದ ದರಗಳಂತೆ ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ಸರ್ಕಾರದ ಆದೇಶ ಸಂಖ್ಯೆ: ಆಕುಕ 144 ಎಂಎಂಇ 98, ದಿನಾಂಕ 30-03-1999 ರಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಕುಕ 328 ಎಂಎಸ್‌ಎಫ್ 07, ದಿನಾಂಕ 27-07-2007 ರಲ್ಲಿ ತಿಳಿಸಿರುವ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ನಿಗದಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದುಪಡಿಸಬಹುದೆಂದು ಸಂಸ್ಥೆಯು ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ನೀಡತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ / ಲೀಸ್ ಆದ ಪಕ್ಷದಲ್ಲಿ ಬಾಡಿಗೆ / ಲೀಸ್ ಕರಾರು ಪತ್ರವು ರೂ.100/- ರ ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ / ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿಗಿರತಕ್ಕದ್ದು.

(19) ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 05 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್‌ನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ನೀಡತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ತೆಗೆದುಕೊಳ್ಳುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ಬೋರ್ಡ್‌ಗೆ ನೀಡತಕ್ಕದ್ದು.

(21) ರಾಜ್ಯ ಸರ್ಕಾರ ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

(22) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

11/1/12

(ವಿ. ಸಾಯಿಬಾಬಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)
22034293

11/02/12

<u>ಇವರಿಗೆ:</u>

1. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.
2. ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಲಕ್ಷ್ಮಿ ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಂ.5, ಹೊಸ ನಂ.40/20ಎ, ವಾಣಿ ವಿಲಾಸ ಆಸ್ಪತ್ರೆ ಎದುರು, ಫೋರ್ಟ್, ಬೆಂಗಳೂರು -560002.
3. ಅಧ್ಯಕ್ಷರು / ಕಾರ್ಯದರ್ಶಿ / ಪ್ರಾಂಶುಪಾಲರು, ಅನ್ನಪೂರ್ಣ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಹೊಸ ಮಹೀಂದ್ರಕರ್ ಬಿಲ್ಡಿಂಗ್, ಹುಣಸಗಿ ರಸ್ತೆ, ವಿದ್ಯಾನಗರ, ತಾಳಿಕೋಟೆ, ಬಿಜಾಪುರ ಜಿಲ್ಲೆ - 586214.
4. ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು - (ಪ್ರಕರಣ ಸಂಖ್ಯೆ:ಸಿ.451/2011)
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಕಾಸ ಸೌಧ, ಬೆಂಗಳೂರು.